ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**29.04.2024 / 14.30 hrs**
**<><><><>**

ಮುಖ್ಯಾಂಶಗಳು

೧. ಬಾಗಲಕೋಟೆಯಲ್ಲಿ ಬಿಜೆಪಿ ಹಿರಿಯ ನಾಯಕ ಪ್ರಧಾನಿ ನರೇಂದ್ರ ಮೋದಿ ಚುನಾವಣಾ ಪ್ರಚಾರ

೨. ಕಲಬುರಗಿಯಲ್ಲಿಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ ಚುನಾವಣಾ ಅಭಿಯಾನ

೩. ಬಿಜೆಪಿ ಹಿರಿಯ ಧುರೀಣ, ಸಂಸದ ಶ್ರೀನಿವಾಸ್ ಪ್ರಸಾದ್ ನಿಧನ; ಗಣ್ಯರ ಸಂತಾಪ

೪. ರಾಜ್ಯದಲ್ಲಿ ಇನ್ನೂ ಆರು ದಿನ ಬಿಸಿಲ ತಾಪ; ಬೆಂಗಳೂರಿನಲ್ಲಿ ನಿನ್ನೆ ದಾಖಲೆಯ ಉಷ್ಣಾಂಶ ದಾಖಲು

೫. ಐಪಿಎಲ್ ಟಿ-೨೦ ಕ್ರಿಕೆಟ್ : ಇಂದು ಕೋಲ್ಕತ್ತಾ ನೈಟ್ ರೈಡರ್ಸ್-ಡೆಲ್ಲಿ ಕ್ಯಾಪಿಟಲ್ಸ್ ಹಣಾಹಣಿ

**<><><><>**

ಬಿಜೆಪಿ ಹಿರಿಯ ನಾಯಕ, ಪ್ರಧಾನಿ ನರೇಂದ್ರ ಮೋದಿ ಬಾಗಲಕೋಟೆಯಲ್ಲಿ ಚುನಾವಣಾ ಪ್ರಚಾರ ನಡೆಸಿದರು. ಇದೇ ವೇಳೆ ಮಾತನಾಡಿದ ಅವರು, ಬಿಜೆಪಿ ಅಧಿಕಾರಕ್ಕೆ ಬಂದರೆ ಐಹೊಳೆ, ಪಟ್ಟದಕಲ್ಲು, ಬಾದಾಮಿ ಅಭಿವೃದ್ಧಿಪಡಿಸಲಾಗುವುದು ಎಂದರು. ಈ ಲೋಕಸಭಾ ಚುನಾವಣೆ ಆತ್ಮನಿರ್ಭರದ ಪ್ರತೀಕವಾಗಿದೆ ಎಂದು ಹೇಳಿದರು. ಯಾವುದೇ ಕಾರಣಕ್ಕೂ ಒಬಿಸಿಗೆ ಅಲ್ಪಸಂಖ್ಯಾತರನ್ನು ಸೇರಿಸಲು ಬಿಡುವುದಿಲ್ಲ ಎಂದು ತಿಳಿಸಿದರು. ೨೦೪೭ ರ ವೇಳೆಗೆ ಭಾರತವನ್ನು ಅಭಿವೃದ್ಧಿಹೊಂದಿದ ರಾಷ್ಟ್ರವನ್ನಾಗಿ ಮಾಡುವ ಗುರಿಯೊಂದಿಗೆ ದಿನದ ೨೪ ಗಂಟೆಯೂ ಶ್ರಮ ವಹಿಸುತ್ತಿದ್ದೇನೆ ಎಂದು ಪ್ರಧಾನಿ ತಿಳಿಸಿದರು. ಪ್ರಧಾನಮಂತ್ರಿ ಆವಾಸ್ ಯೋಜನೆ ಅಡಿಯಲ್ಲಿ ೪ ಕೋಟಿ ಮನೆಗಳನ್ನು ವಿತರಿಸಲಾಗಿದೆ. ೫೫ ಕೋಟಿ ಉಜ್ವಲ ಯೋಜನೆಯಡಿ ಬ್ಯಾಂಕ್ ಖಾತೆಗಳನ್ನು ತೆರಯಲಾಗಿದ್ದು, ಗ್ಯಾಸ್ ಸಂಪರ್ಕಗಳನ್ನು ಒದಗಿಸಲಾಗಿದೆ ಎಂದು ಹೇಳಿದರು. ಇನ್ನೊಂದೆಡೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಲಬುರಗಿಯ ಗುರುಮಿಠ್ಕಲ್‌ನಲ್ಲಿ ಚುನಾವಣಾ ಪ್ರಚಾರ ನಡೆಸಲಿದ್ದಾರೆ. ಮಧ್ಯಾಹ್ನ ಕಲಬುರಗಿಯ ಸೇಡಂನಲ್ಲಿ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ ವಾದ್ರಾ, ಅಭ್ಯರ್ಥಿಗಳ ಪರ ಮತಯಾಚಿಸಲಿದ್ದಾರೆ.

**<><><><>**

ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಇಂಡಿಗನತ್ತ ಗ್ರಾಮದಲ್ಲಿ ಮರುಮತದಾನ ಪ್ರಗತಿಯಲ್ಲಿದೆ. ಬೆಳಿಗ್ಗೆ ೭ರವರೆಗೆ ಮತದಾನ ಆರಂಭವಾಗಿದ್ದು, ಸಂಜೆ ೬ರವರೆಗೆ ಮತ ಹಾಕಲು ಅವಕಾಶ ಕಲ್ಪಿಸಲಾಗಿದೆ. ಏಪ್ರಿಲ್ ೨೬ರಂದು ಗ್ರಾಮಸ್ಥರು ಮತದಾನಕ್ಕೆ ಬಹಿಷ್ಕಾರ ಹಾಕಿದ್ದರು. ಆ ವೇಳೆ ಗ್ರಾಮದ ಕೆಲವರು ಮತಗಟ್ಟೆಯನ್ನೇ ಧ್ವಂಸ ಮಾಡಿದ್ದ ಹಿನ್ನೆಲೆಯಲ್ಲಿ ಮರುಮತದಾನ ನಡೆಸಲಾಗುತ್ತಿದೆ.

**<><><><>**

ಲೋಕಸಭಾ ಚುನಾವಣಾ ಹಿನ್ನೆಲೆಯಲ್ಲಿ ಉತ್ತರಕನ್ನಡ ಜಿಲ್ಲೆಯ ಕಾರವಾರ ತಾಲೂಕಿನ ಮಾಜಾಳಿಯಲ್ಲಿ ತೆರೆದಿರುವ ಚೆಕ್ ಪೋಸ್ಟ್ ಗೆ ಜಿಲ್ಲಾ ಚುನಾವಣಾಧಿಕಾರಿ ಗಂಗೂಬಾಯಿ ಮಾನಕರ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಚೆಕ್ ಪೋಸ್ಟ್ ನಲ್ಲಿನ ದಾಖಲೆಗಳನ್ನು ಪರಿಶೀಲಿಸಿದ ಅವರು, ಜಿಲ್ಲೆಯಲ್ಲಿ ಮೇ ೭ ರಂದು ಮತದಾನ ನಡೆಯುವುದರಿಂದ ಯಾವುದೇ ಅಕ್ರಮಗಳು ನಡೆಯದಂತೆ ಎಚ್ಚರಿಕೆ ವಹಿಸುವಂತೆ ಸಿಬ್ಬಂದಿಗೆ ಸೂಚನೆ ನೀಡಿದರು. ಗದಗ ಜಿಲ್ಲೆಯ ಮುಂಡರಗಿ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಮುಂಡರಗಿ ಪಟ್ಟಣದಲ್ಲಿ 'ನಮ್ಮ ನಡೆ ಮತಗಟ್ಟೆ ಕಡೆ' ಕಾರ್ಯಕ್ರಮದಡಿ ಕಾಲ್ನಡಿಗೆ ಜಾಥಾ ಜರುಗಿತು. ಮುಂಡರಗಿಯ ತಹಶೀಲ್ದಾರ್ ಧನಂಜಯ ಮಾಲಗತ್ತಿ, ಜಾಥಾಗೆ ಚಾಲನೆ ನೀಡಿದರು. ಪಟ್ಟಣದ ಕೋಟೆಭಾಗದ ಮತಗಟ್ಟೆಗಳಲ್ಲಿ ಕಳೆದ ಬಾರಿ ಕಡಿಮೆ ಮತದಾನವಾಗಿದ್ದು, ಈ ಬಾರಿ ಲೋಕಸಭೆ ಚುನಾವಣೆಗೆ ನೂರಕ್ಕೆ ನೂರರಷ್ಟು ಮತದಾನವಾಗಬೇಕು ಎಂದು ಕರೆ ನೀಡಿದರು. ಕೋಲಾರದಲ್ಲಿ ಲೋಕಸಭಾ ಚುನಾವಣೆಯ ಮತದಾನ ಯಶಸ್ವಿಯಾಗಿ ನಡೆದಿದ್ದು, ೮ ವಿಧಾನಸಭಾ ಕ್ಷೇತ್ರಗಳಿಂದ ಟ್ರಕ್‌ಗಳ ಮೂಲಕ ಬಂದ ಇವಿಎಂ ಯಂತ್ರಗಳನ್ನು ಸರಕಾರಿ ಬಾಲಕರ ಪ್ರಥಮ ದರ್ಜೆ ಕಾಲೇಜಿನಲ್ಲಿ ಸ್ಥಾಪಿಸಿರುವ ಸ್ಟ್ರಾಂಗ್ ರೂಂಗಳಲ್ಲಿರಿಸಲಾಗಿದೆ. ಜೂನ್ ೪ ರಂದು ಮತ ಎಣಿಕೆ ನಡೆಯಲಿದ್ದು, ಸ್ಟ್ರಾಂಗ್ ರೂಂಗಳಿರುವ ಕಾಲೇಜಿನ ಸುತ್ತಲೂ

ಕೇಂದ್ರೀಯ ಪಡೆ ಹಾಗೂ ಪೊಲೀಸ್ ಸಿಬ್ಬಂದಿಯನ್ನು ಬಿಗಿ ಭದ್ರತೆಗೆ ನಿಯೋಜಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಅಕ್ರಂ ಪಾಷ ತಿಳಿಸಿದ್ದಾರೆ.

**<><><><>**

ಕರ್ನಾಟಕದ ಚಾಮರಾಜನಗರದ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಇಂದು ಮುಂಜಾನೆ ಬೆಂಗಳೂರಿನಲ್ಲಿ ನಿಧನರಾಗಿದ್ದಾರೆ. ಅವರಿಗೆ ೭೬ ವರ್ಷ ವಯಸ್ಸಾಗಿತ್ತು. ಅವರು ಪತ್ನಿ ಹಾಗೂ ಮೂವರು ಪುತ್ರಿಯರನ್ನು ಅಗಲಿದ್ದಾರೆ. ಶ್ರೀನಿವಾಸ ಪ್ರಸಾದ್ ಅವರ ಪಾರ್ಥಿವ ಶರೀರವನ್ನು ಮೈಸೂರಿನ ಜಯಲಕ್ಷ್ಮಿಪುರಂನ ಅವರ ನಿವಾಸದಲ್ಲಿ ಇಂದು ಬೆಳಿಗ್ಗೆ ಸಾರ್ವಜನಿಕ ದರ್ಶನಕ್ಕೆ ಇಡಲಾಗಿತ್ತು. ಸಹಸ್ರಾರು ಮಂದಿ ಅವರ ಅಂತಿಮ ದರ್ಶನ ಪಡೆದರು. ಬೌದ್ಧ ಧರ್ಮದ ವಿಧಿ ವಿಧಾನದಂತೆ ನಾಳೆ ಡಾ. ಅಂಬೇಡ್ಕರ್ ಟ್ರಸ್ಟ್ ಆವರಣದಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಅವರ ಪುತ್ರಿ ಪ್ರತಿಮಾ ಪ್ರಸಾದ್ ಮಾಹಿತಿ ನೀಡಿದ್ದಾರೆ. ೧೯೪೭ರ ಆಗಸ್ಟ್ ೬ರಂದು ಜನಿಸಿದ್ದ ಅವರು, ೬ ಬಾರಿ ಲೋಕಸಭಾ ಸದಸ್ಯರಾಗಿ ಚಾಮರಾಜನಗರ ಕ್ಷೇತ್ರವನ್ನು ಪ್ರತಿನಿಧಿಸಿದರು. ಅಲ್ಲದೇ ಕರ್ನಾಟಕ ಸರ್ಕಾರದಲ್ಲಿ ಕಂದಾಯ ಮತ್ತು ಮುಜರಾಯಿ ಸಚಿವರಾಗಿಯೂ ಕಾರ್ಯನಿರ್ವಹಿಸಿದರು. ಮೂಲತಃ ಕಾಂಗ್ರೆಸ್ ಪಕ್ಷದಲ್ಲಿ ಗುರುತಿಸಿಕೊಂಡಿದ್ದ ಅವರು, ೨೦೧೯ರ ಚುನಾವಣೆ ವೇಳೆ ಬಿಜೆಪಿ ಪಕ್ಷಕ್ಕೆ ಸೇರ್ಪಡೆಯಾಗಿ ಆ ಪಕ್ಷದಿಂದ ಸಂಸದರಾಗಿ ಆಯ್ಕೆಯಾಗಿ ಕಾರ್ಯನಿರ್ವಹಿಸುತ್ತಿದ್ದರು.

**<><><><>**

ಕರ್ನಾಟಕದ ಸಂಸದ ಹಾಗೂ ಹಿರಿಯ ರಾಜಕಾರಣಿ ವಿ. ಶ್ರೀನಿವಾಸ ಪ್ರಸಾದ್ ನಿಧನಕ್ಕೆ ಪ್ರಧಾನಿ ಸೇರಿದಂತೆ ಹಲವು ಗಣ್ಯರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ತಮ್ಮ ಸಂದೇಶದಲ್ಲಿ ಶ್ರೀನಿವಾಸ ಪ್ರಸಾದ್ ಜೀ ಅವರು, ಸಾಮಾಜಿಕ ನ್ಯಾಯದ ಚಾಂಪಿಯನ್ ಆಗಿದ್ದರು. ಅವರು, ಬಡವರು, ಶೋಷಿತರು ಹಾಗೂ ದುರ್ಬಲ ವರ್ಗದವರ ಕಲ್ಯಾಣಕ್ಕಾಗಿ ತಮ್ಮ ಜೀವನವನ್ನು ಮುಡುಪಾಗಿಟ್ಟಿದ್ದರು ಎಂದು ಸ್ಮರಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ದಲಿತರ ಪರವಾದ ದಿಟ್ಟ ದನಿಯುಳ್ಳ ಹಿರಿಯ ಮುತ್ಸದಿ ನಾಯಕ ಶ್ರೀನಿವಾಸ ಪ್ರಸಾದ್ ಅವರ ಸಾವು ನನ್ನನ್ನು ಆಘಾತಕ್ಕೀಡು ಮಾಡಿದೆ. ಅನ್ಯಾಯ-ಅಸಮಾನತೆಯ ವಿರುದ್ಧದ ಹೋರಾಟವನ್ನು ಬದುಕಾಗಿಸಿಕೊಂಡಿದ್ದ ಅವರ ಅಗಲಿಕೆ ರಾಜ್ಯದ ಸಾಮಾಜಿಕ ನ್ಯಾಯದ ಪರವಾದ ರಾಜಕೀಯ ಹೋರಾಟಕ್ಕೆ ದೊಡ್ಡ ಹಿನ್ನಡೆಯಾಗಿದೆ. ದೀರ್ಘಕಾಲ ಜನಸೇವೆ ಮಾಡಿದ್ದ ಅವರು, ಹಳೆ ಮೈಸೂರು ವಿಭಾಗದಲ್ಲಿ ಪ್ರಭಾವಿ ನಾಯಕರಾಗಿದ್ದರು ಎಂದು ಸ್ಮರಿಸಿದ್ದಾರೆ. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಮ್ಮ ಸಂತಾಪ ಸಂದೇಶದಲ್ಲಿ ದೇಶದ ರಾಜಕೀಯದಲ್ಲಿ ತಮ್ಮದೇ ಛಾಪು ಮೂಡಿಸಿದ ಶ್ರೀನಿವಾಸಪ್ರಸಾದ್ ಪ್ರಭಾವಿ ದಲಿತ ಮುಖಂಡರಾಗಿ ಗುರುತಿಸಿಕೊಂಡಿದ್ದರು. ಅವರ ನಿಧನದಿಂದ ನಾಡು ಒಬ್ಬ ಹಿರಿಯ ನೇತಾರನನ್ನು ಕಳೆದುಕೊಂಡಂತಾಗಿದೆ ಎಂದು ತಿಳಿಸಿದ್ದಾರೆ. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ೫೦ ವರ್ಷಗಳ ಕಾಲ ಶ್ರೀನಿವಾಸ ಪ್ರಸಾದ್ ಅವರು, ಶಾಸಕರಾಗಿ, ಸಂಸದರಾಗಿ, ರಾಜಕೀಯ ಜೀವನದಲ್ಲಿ ತೊಡಗಿಸಿಕೊಂಡು ಸಾಕಷ್ಟು ಜನಪರ ಕಾರ್ಯಗಳ ಮೂಲಕ ಜನಾನುರಾಗಿಯಾಗಿದ್ದರು ಎಂದು ಹೇಳಿದ್ದಾರೆ.

**<><><><>**

ರಾಜ್ಯದಲ್ಲಿ ಮೇ ೭ರಂದು ೧೪ ಲೋಕಸಭಾ ಕ್ಷೇತ್ರಗಳಿಗೆ ಎರಡನೇ ಹಂತದ ಮತದಾನ ನಡೆಯಲಿದೆ. ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ರಾಯಚೂರು, ಬೀದರ್, ಕೊಪ್ಪಳ, ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರಕನ್ನಡ, ದಾವಣಗೆರೆ ಮತ್ತು ಶಿವಮೊಗ್ಗ ಕ್ಷೇತ್ರಗಳಲ್ಲಿ ಮೇ ೭ರಂದು ಚುನಾವಣೆ ನಡೆಯಲಿದೆ. ಆಕಾಶವಾಣಿ ಪ್ರಾದೇಶಿಕ ಸುದ್ದಿ ವಿಭಾಗದ ಜಿಲ್ಲಾ ವರದಿಗಾರರು ಸಿದ್ಧಪಡಿಸಿರುವ ಉಳಿದ ೧೪ ಲೋಕಸಭಾ ಕ್ಷೇತ್ರಗಳ ಸಮಗ್ರ ಚಿತ್ರಣವನ್ನು ಒದಗಿಸುವ 'ಮತಕ್ಷೇತ್ರ ದರ್ಶನ' ಮಾಹಿತಿ ಇಂದಿನಿಂದ ಪ್ರಸಾರವಾಗಲಿದೆ. ಈಗ ರಾಯಚೂರು ಲೋಕಸಭಾ ಕ್ಷೇತ್ರದ ವಿವರಗಳು : ವರದಿ ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ, ಬಿ. ವೆಂಕಟ್ ಸಿಂಗ್ ಆಂಧ್ರ - ತೆಲಂಗಾಣ ಭಾಗದ ರಾಯಚೂರು ಲೋಕಸಭಾ ಕ್ಷೇತ್ರ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ೮ ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದೆ. ರಾಯಚೂರು ಜಿಲ್ಲೆಯ ರಾಯಚೂರು ನಗರ, ರಾಯಚೂರು ಗ್ರಾಮೀಣ, ಮಾನ್ವಿ, ದೇವದುರ್ಗ, ಲಿಂಗಸೂಗೂರು, ಮತ್ತು ಯಾದಗಿರಿ ಜಿಲ್ಲೆಯ ಸುರಪುರ ಮತ್ತು ಯಾದಗಿರಿ ವಿಧಾನಸಭಾ ಕ್ಷೇತ್ರಗಳು ಸೇರಿವೆ. ಪ್ರಸ್ತುತ ಬಿಜೆಪಿಯಿಂದ ಹಾಲಿ ಸಂಸದ ರಾಜಾ ಅಮರೇಶ್ವರ ನಾಯಕ, ಕಾಂಗ್ರೆಸ್‌ನಿಂದ ಜಿ.ಕುಮಾರ ನಾಯಕ ಕಣದಲ್ಲಿದ್ದಾರೆ. ೧೯೮೬ರ ಉಪಚುನಾವಣೆಯಲ್ಲಿ ಬಳ್ಳಾರಿ ಜಿಲ್ಲೆಯ ಸಂಡೂರು ರಾಜ ವಂಶದವರಾದ ಎಂ.ವೈ.ಘೋರ್ಪಡೆ ಕಾಂಗ್ರೆಸ್ ಪಕ್ಷದಿಂದ ಆಯ್ಕೆಯಾದರು. ಈ ಚುನಾವಣೆ ರಾಯಚೂರು ಲೋಕಸಭಾದ ಹೊಸ ರಾಜಕೀಯ ತಿರುವಿಗೆ ಕಾರಣವಾಯಿತು. ರಾಜ್ಯದಲ್ಲಿ ರಾಮಕೃಷ್ಣ ಹೆಗಡೆ ನೇತೃತ್ವದ ಜನತಾದಳ ಸರ್ಕಾರ ಅಧಿಕಾರದಲ್ಲಿದ್ದಾಗ ಚತುರಮತಿಯಾದ ಅವರು ಈ ಕ್ಷೇತ್ರದಲ್ಲಿ ನಾಯಕ ಜನಾಂಗದ ಜನಸಂಖ್ಯೆ ಗುರುತಿಸಿ ಜನತಾ ಪಕ್ಷದಿಂದ ಗುರುಗುಂಟಾದ ರಾಜಾ ಮನೆತನದ ರಾಜಾ ಅಮರಪ್ಪ ನಾಯಕ ಅವರನ್ನು ಕಣಕ್ಕಿಳಿಸಿ ಕಾಂಗ್ರೆಸ್ ಭದ್ರಕೋಟೆ ಛಿದ್ರಗೊಳಿಸಲು ಯತ್ನಿಸಿದರಾದರೂ ಕೇವಲ ೪ ಸಾವಿರ ಮತಗಳ ಅಂತರದಲ್ಲಿ ಪರಾಭವಗೊಂಡರು. ಆಗಿನಿಂದ ಈ ಕ್ಷೇತ್ರದಲ್ಲಿ ನಾಯಕ

ಜನಾಂಗದವರಿಗೆ ಲೋಕಸಭೆಯ ಟಿಕೆಟ್ ನೀಡಿದರೆ ಗೆಲುವು ಖಚಿತ ಎಂಬ ಲೆಕ್ಕಾಚಾರದ ಮೇಲೆ ಕಾಂಗ್ರೆಸ್ ಪಕ್ಷ ೧೯೮೯ರಲ್ಲಿ ಮೂಲತಃ ದೇವದುರ್ಗ ತಾಲೂಕಿನವರಾದ ರಾಜಾ ಅಂಬಣ್ಣ ನಾಯಕ ದೊರೆ ಅವರನ್ನು ಕಣಕ್ಕಿಳಿಸಿದಾಗ ಅನಾಯಾಸವಾಗಿ ಜಯಗಳಿಸಿದರು. ಬದಲಾದ ರಾಜಕೀಯ ಸನ್ನಿವೇಶದಲ್ಲಿ ೨೦೦೯ರಲ್ಲಿ ಕ್ಷೇತ್ರ ಪುನರ್ವಿಂಗಡನೆಯಾದ ಬಳಿಕ ರಾಯಚೂರು ಲೋಕಸಭಾ ಕ್ಷೇತ್ರ ಪರಿಶಿಷ್ಟ ಪಂಗಡಕ್ಕೆ ಮೀಸಲಾಯಿತು, ಆದರೆ, ಸಾಮಾನ್ಯ ಕ್ಷೇತ್ರವಾಗಿದ್ದಾಗ ಐದು ಬಾರಿ ಟಿಕೆಟ್ ಪಡೆದ ವೆಂಕಟೇಶ ನಾಯಕ ತಮ್ಮದೇ ಜನಾಂಗಕ್ಕೆ ಈ ಕ್ಷೇತ್ರ ಮೀಸಲಾದಾಗ ಟಿಕೆಟ್ ವಂಚಿತವಾಗ ಬೇಕಾದ ಪ್ರಸಂಗ ಒದಗಿ ಬಂತು.  ೨೦೦೯ರಲ್ಲಿ ವೆಂಕಟೇಶ ನಾಯಕ ಬದಲಿಗೆ ಸುರಪುರದ ಮಾಜಿ ಶಾಸಕರಾಗಿದ್ದ ಡಾ.ರಾಜಾ ವೆಂಕಟಪ್ಪ ನಾಯಕ ಅವರನ್ನು ಕಾಂಗ್ರೆಸ್ ಪಕ್ಷದಿಂದ ಕಣಕ್ಕಿಳಿಸಲಾಗಿತ್ತು. ಆದರೆ, ಬಳ್ಳಾರಿಯ ಸಣ್ಣ ಪಕೀರಪ್ಪ ಅವರನ್ನು ಬಿಜೆಪಿ ಅಭ್ಯರ್ಥಿಯನ್ನಾಗಿ ಮಾಡುವ ಮೂಲಕ ಅದೇ ಮೊದಲ ಬಾರಿಗೆ ಈ ಕ್ಷೇತ್ರದಲ್ಲಿ ಕಮಲ ಅರಳುವಂತೆ ಮಾಡಿ ಕಾಂಗ್ರೆಸ್ ಭದ್ರಕೋಟೆಯನ್ನು ಕಮಲ ಕಸಿದುಕೊಂಡಿತು. ರಾಜ್ಯದಲ್ಲಿ ಆಗ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದ ಕಾರಣ ಜಯಗಳಿಸಿದ ಬಿಜೆಪಿ ಪುನಃ ೨೦೧೪ರಲ್ಲಿ ನಡೆದ ಚುನಾವಣೆಯಲ್ಲಿ ಪರಾಭವಗೊಳ್ಳುವಂತಹ ಸ್ಥಿತಿ ಒದಗಿ ಬಂತು. ಆಗ ಕಾಂಗ್ರೆಸ್ ಪಕ್ಷದಿಂದ ವೆಂಕಟೇಶ ನಾಯಕ ಅವರ ಪುತ್ರ ಬಿ.ವಿ.ನಾಯಕ ಜಯಗಳಿಸುವ ಮೂಲಕ ತಮ್ಮ ತಂದೆ ನಾಲ್ಕು ಬಾರಿ ಪ್ರತಿನಿಧಿಸಿದ ಸ್ಥಾನ ಗಿಟ್ಟಿಸಿಕೊಂಡರು. ೨೦೧೯ರಲ್ಲಿ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಬಿ.ವಿ.ನಾಯಕ ಅಭ್ಯರ್ಥಿಯಾದರೆ ಇವರ ವಿರುದ್ಧ ರಾಜಾ ಅಮರೇಶ್ವರ ನಾಯಕ  ಬಿಜೆಪಿ ಅಭ್ಯರ್ಥಿಯಾಗಿ ಕಣಕ್ಕಿಳಿದು ಎರಡನೇ ಬಾರಿಗೆ ಈ ಕ್ಷೇತ್ರದಲ್ಲಿ ಕಮಲ ಅರಳಿಸುವ ಮೂಲಕ ಭಾರತೀಯ ಜನತಾ ಪಕ್ಷದಿಂದ ಸಂಸತ್ ಪ್ರವೇಶ ಮಾಡಿದರು. ರಾಯಚೂರು ಲೋಕಸಭಾ ಕ್ಷೇತ್ರದಲ್ಲಿ ಕಳೆದ ಏಳು ದಶಕದಲ್ಲಿ ರಾಜಕೀಯ ಏಳು-ಬೀಳುಗಳ ಮಧ್ಯೆ ಚುನಾವಣೆಗಳು ನಡೆದಿದ್ದು ಪ್ರಸ್ತುತ ೨೦೨೪ರ ಲೋಕಸಭೆಗೆ ಚುನಾವಣೆ ಕಾವು ಜೋರಾಗಿದೆ.

<><><><>

ಕರ್ನಾಟಕ ಸೇರಿದಂತೆ ಉತ್ತರ ಹಾಗೂ ದಕ್ಷಿಣಭಾರತದ ಹಲವು ರಾಜ್ಯಗಳಲ್ಲಿ ಬಿಸಿಗಾಳಿ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲಿ ನಿನ್ನೆ ೩೮.೨ ಡಿಗ್ರಿ ಉಷ್ಣಾಂಶ ದಾಖಲಾಗಿದ್ದು ಕಳೆದ ೫೦ ವರ್ಷಗಳಲ್ಲಿ ದಾಖಲಾಗದ ಎರಡನೇ ಅತಿ ಹೆಚ್ಚು ತಾಪಮಾನವಾಗಿದೆ. ಬೆಂಗಳೂರಿನಲ್ಲಿ ೨೦೧೬ ರ ಏಪ್ರಿಲ್ ೨೫ ರಂದು ದಾಖಲೆಯ ೩೯.೨ ಡಿಗ್ರಿ ತಾಪಮಾನ ದಾಖಲಾಗಿತ್ತು ಎಂದು ಹವಾಮಾನ ಇಲಾಖೆ ತಿಳಿಸಿದೆ. ರಾಜ್ಯದ ಒಳನಾಡು ಜಿಲ್ಲೆಗಳಲ್ಲಿ ಮೇ ೪ರವರೆಗೆ ಬಿಸಿ ಗಾಳಿ ಹೆಚ್ಚಾಗುವ ಸಾಧ್ಯತೆಯಿದೆ. ರಾಜ್ಯ ಹವಾಮಾನ ಇಲಾಖೆ ೧೭ ಜಿಲ್ಲೆಗಳಲ್ಲೆ ಆರೆಂಜ್ ಅಲರ್ಟ್ ಘೋಷಿಸಿದೆ. ಕರಾವಳಿ ಕರ್ನಾಟಕದಲ್ಲಿ ಬಿಸಿ ಮತ್ತು ಶುಷ್ಕ ವಾತಾವರಣ ಹೆಚ್ಚಾಗಿರುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಬೆಂಗಳೂರು ಕೇಂದ್ರದ ನಿರ್ದೇಶಕ, ಹಿರಿಯ ವಿಜ್ಞಾನಿ ಸಿ.ಎಸ್.ಪಾಟೀಲ್ ತಿಳಿಸಿದ್ದಾರೆ.

<><><><>

ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿಂದು ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆಯಲಿರುವ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ.  ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ.

<><><><>